ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೨೬

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೈದನೆಯ ಅಧಿವೇಶನ

**ಸೋಮವಾರ, ದಿನಾಂಕ: ೨೮ನೇ ಜುಲೈ ೨೦೧೪**

---

**ಸಮೂಹ – I**

೧. ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು

೨. ಸಾರಿಗೆ ಸಚಿವರು

೩. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

೪. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು

೫. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು

೬. ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು

---

### ವಿದ್ಯಾರ್ಥಿ ನಿಲಯಗಳು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೩೭೬ (೨೧೦೬) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಎಸ್‌ಸಿ/ಎಸ್‌ಟಿ/ಬಿಸಿಎಂ/ಪ್ರೀ ಮೆಟ್ರಿಕ್/ಪೋಸ್ಟ್ ಮೆಟ್ರಿಕ್ ಹಾಗೂ ಕಾಲೇಜು ಹಂತದ ವಿದ್ಯಾರ್ಥಿನಿಲಯಗಳ ವಿವರ ನೀಡುವುದು ;

(ಆ) ಸ್ವಂತ ಕಟ್ಟಡಗಳನ್ನು ಹೊಂದಿರುವ ವಿದ್ಯಾರ್ಥಿನಿಲಯಗಳು ಎಷ್ಟು ; ಹೊಂದಿದ್ದರೆ, ಮಾಹಿತಿ ನೀಡುವುದು ;

(ಇ) ಒಟ್ಟಾರೆ ಎಲ್ಲಾ ವಿದ್ಯಾರ್ಥಿನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ವಿದ್ಯಾರ್ಥಿನಿಲಯವಾರು ವಿವರ ನೀಡುವುದು ;

(ಈ) ಈ ವಿದ್ಯಾರ್ಥಿನಿಲಯಗಳ ನಿರ್ವಹಣೆಯಲ್ಲಿ ಲೋಪವೆಸಗಿರುವ ಇಲಾಖಾ ಅಧಿಕಾರಿಗಳು ಹಾಗೂ ನೌಕರರ ವಿವರ ನೀಡುವುದು ;

(ಉ) ರಾಜ್ಯದಲ್ಲಿರುವ ಎಲ್ಲಾ ವಿದ್ಯಾರ್ಥಿ ವಸತಿನಿಲಯಗಳ ಸಂಪರ್ಕ ನಿರ್ವಹಣೆಗೆ ''ಹಾಸ್ಟಲ್ ನಿರ್ವಹಣಾ ಪ್ರಾಧಿಕಾರ'' ರಚನೆ ಮಾಡಲು ಸರ್ಕಾರ ಯೋಚಿಸಿದೆಯೇ ?

## ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಸಹ ನಿರ್ದೇಶಕರ ಹುದ್ದೆ ತುಂಬುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭೭ (೨೦೯೪) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಾರ್ವಜನಿಕ ಆರೋಗ್ಯ ಸಂಸ್ಥೆಯಲ್ಲಿ ಸಹ ನಿರ್ದೇಶಕರು (ಆಹಾರ ಸುರಕ್ಷತೆ ಮತ್ತು ಗುಣಮಟ್ಟ) ಹುದ್ದೆ ಎಷ್ಟು ಸಮಯದಿಂದ ಮತ್ತು ಯಾವ ದಿನಾಂಕದಿಂದ ಖಾಲಿ ಇದೆ ; ಖಾಲಿ ಬಿಡಲು ಕಾರಣವೇನು ;

(ಆ) ಯಾವಾಗ ಈ ಹುದ್ದೆಯನ್ನು ಭರ್ತಿ ಮಾಡಲಾಗುವುದು ಮತ್ತು ಭರ್ತಿ ಮಾಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ;

(ಇ) ಸಾರ್ವಜನಿಕ ಆರೋಗ್ಯ ಸಂಸ್ಥೆಯಲ್ಲಿ ಯಾವ–ಯಾವ ಹುದ್ದೆಗಳು ಎಷ್ಟು ಸಮಯದಿಂದ ಖಾಲಿ ಇವೆ; ಇವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು ?

## ಬೆಳಗಾವಿ ಸಿವಿಲ್ ಆಸ್ಪತ್ರೆಯ ನವೀಕರಣ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೩೭೮ (೨೧೧೦) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿಯ ಹಳೆ ಸಿವಿಲ್ ಆಸ್ಪತ್ರೆ ಉಸ್ತುವಾರಿಯು ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿ ಇರುವುದೋ ಅಥವಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದಲ್ಲಿ ಇರುವುದೋ ;

(ಆ) ಈ ಆಸ್ಪತ್ರೆಯನ್ನು ಬೆಳಗಾವಿ ಮೆಡಿಕಲ್ ಕಾಲೇಜ್‌ನವರು ಉಪಯೋಗಿಸುತ್ತಿರುವ ಸಂಗತಿ ನಿಜವೇ ;

(ಇ) ಈ ಆಸ್ಪತ್ರೆಯನ್ನು ಬೆಳಗಾವಿ ಮೆಡಿಕಲ್ ಕಾಲೇಜ್‌ನವರೂ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯವರೂ ಸಹ ನವೀಕರಣ ಮಾಡುತ್ತಿರುವುದಿಲ್ಲವೆಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮೆಡಿಕಲ್ ಕಾಲೇಜ್‌ನಲ್ಲಿ ಸಿಟಿ ಸ್ಕ್ಯಾನ್ ಇರುವುದಿಲ್ಲ ಹಾಗೂ ಯಾವುದೇ ಆಧುನಿಕ ಉಪಕರಣಗಳು ಇರುವುದಿಲ್ಲ, ಹೀಗಾಗಿ ರೋಗಿಗಳನ್ನು ಬೇರೆ ಕಡೆಗೆ ಕಳುಹಿಸುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ಆಸ್ಪತ್ರೆಯಲ್ಲಿ ಎಷ್ಟು ರೋಗಿಗಳಿಗೆ ಸ್ಥಳಾವಕಾಶವುಂಟು ; ಒಳರೋಗಿಗಳ ಪ್ರವೇಶಕ್ಕೆ ಅನುಗುಣವಾಗಿ ಸಿಬ್ಬಂದಿ ಇಲ್ಲದೆ ಇರುವ ಸಂಗತಿ ನಿಜವಲ್ಲವೇ ;

(ಊ) ಮೆಡಿಕಲ್ ಕಾಲೇಜ್‌ಗಳಲ್ಲಿ ನಿಯಮಗಳ ಪ್ರಕಾರ ಎಷ್ಟು ಹುದ್ದೆಗಳು (Teaching & Non teaching) ಖಾಲಿ ಇರುತ್ತವೆ ; ಹಾಗೂ ಇವುಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಋ) ಈ ಆಸ್ಪತ್ರೆಯಲ್ಲಿ ವೈದ್ಯರು ರೋಗಿಗಳಿಗೆ ಔಷಧವನ್ನು ಹೊರಗಿನಿಂದ ತರಲು ಚೀಟಿ ಬರೆದುಕೊಡುತ್ತಿರುವ ಸಂಗತಿ ಸರ್ಕಾರಕ್ಕೆ ತಿಳಿದಿದೆಯೇ ?

## ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸ್ಟಾಫ್ ನರ್ಸ್ ಕೊರತೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೭೯ (೨೧೯೩) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಜಿಲ್ಲೆಯ, ಆಳಂದ ಪಟ್ಟಣದ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯರು ಮತ್ತು ಸ್ಟಾಫ್ ನರ್ಸ್ ಇಲ್ಲದೆ ಇರುವುದು ಹಾಗೂ ಆಸ್ಪತ್ರೆಯಲ್ಲಿ ಸ್ವಚ್ಛತೆಯಿಲ್ಲದೇ ಇರುವುದರಿಂದ ರೋಗಿಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಅದನ್ನು ಯಾವಾಗ ಸರಿಪಡಿಸಲಾಗುವುದು ;

(ಆ) ಆಸ್ಪತ್ರೆಯಲ್ಲಿ ಸರಿಯಾದ ಸಮಯದಲ್ಲಿ ಚಿಕಿತ್ಸೆ ಹಾಗೂ ಔಷಧಿಗಳು ದೊರೆಯದೇ ಇರುವುದರಿಂದ ರೋಗಿಗಳಿಗೆ ಹೆಚ್ಚಿನ ತೊಂದರೆಯಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ; ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಳ್ಳುವುದು ಮತ್ತು ಯಾವಾಗ ? (ಸಂಪೂರ್ಣ ಮಾಹಿತಿ ನೀಡುವುದು)

## ಹೊಸ ಪಡಿತರ ಚೀಟಿ ವಿತರಣೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೩೮೦ (೨೧೧೫) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ತುರುವೇಕೆರೆ ತಾಲ್ಲೂಕಿನಾದ್ಯಂತ ಇದುವರೆಗೆ ಪಡಿತರ ಚೀಟಿ ವಿತರಣೆಯಾಗಿರುವುದಿಲ್ಲವೆಂದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಆಯುಕ್ತರ ಕಛೇರಿಯಿಂದ ಹೊಸದಾಗಿ ಆನ್‌ಲೈನ್ ಪಡಿತರ ಚೀಟಿ ನೀಡುವುದನ್ನು ಸ್ಥಗಿತಗೊಳಿಸಿರುತ್ತಾರೆಯೇ ;

(ಇ) ಹೊಸ ಪಡಿತರ ಚೀಟಿಗಳನ್ನು ಮುದ್ರಿಸಲು ಅವಕಾಶ ಕಲ್ಪಿಸಿದ ನಂತರ ಪಡಿತರ ಚೀಟಿಯನ್ನು ನೀಡಲಾಗುವುದೆಂದು ಅಧಿಕಾರಿಗಳು ಹೇಳುತ್ತಿರುವುದು ನಿಜವೇ ;

(ಈ) ಆಯುಕ್ತರ ಕಛೇರಿಯಿಂದ ಪಡಿತರ ಚೀಟಿಯನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಅಲೆಮಾರಿ, ಅರೆ ಅಲೆಮಾರಿ ಅಭಿವೃದ್ಧಿ ನಿಗಮ ಸ್ಥಾಪನೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೩೮೧ (೨೦೭೨) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲೆಮಾರಿ, ಅರೆ ಅಲೆಮಾರಿ ಜನಾಂಗದ ಅಭಿವೃದ್ಧಿ ನಿಗಮ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಹಾಗಿದ್ದಲ್ಲಿ, ಯಾವಾಗ ನಿಗಮ ಸ್ಥಾಪಿಸಲಾಗುವುದು ;

(ಇ) ೨೦೧೪–೧೫ನೇ ಸಾಲಿನಲ್ಲಿ ಈ ಉದ್ದೇಶಕ್ಕಾಗಿ ಅನುದಾನವನ್ನು ಮೀಸಲಿರಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

## GASTRO ENTEROLOGY INSTITUTE

**ಡಾ॥ ಎಂ.ಆರ್. ಹುಲಿನಾಯ್ಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೨ (೨೧೨೩) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ Institute of Gastro Enterology ಪ್ರಾರಂಭ ಮಾಡಲಿಕ್ಕೆ ಸರ್ಕಾರ ಚಿಂತನೆ ಮಾಡುತ್ತಿದೆಯೇ ;

(ಆ) ಅದಕ್ಕೆ ರೂಪಿಸಿದ ರೂಪುರೇಷೆಗಳೇನು ; ಸ್ಥಳ ಮತ್ತು ಹಣ ನಿಗದಿಪಡಿಸಲಾಗಿದೆಯೇ ? (Liver Transplant ಕಾರ್ಯಕ್ರಮಗಳ ವಿವರಣೆಯೊಂದಿಗೆ)

## ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೩೮೩ (೨೧೨೯) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳಲ್ಲಿ ಇರುವ ಮೂಲಭೂತ ಸೌಲಭ್ಯಗಳ ಕೊರತೆಗಳು ಯಾವುವು ; (ಕಾಲೇಜುವಾರು ವಿವರಗಳು)

(ಆ) ಸದರಿ ಕಾಲೇಜುಗಳ ಆಸ್ಪತ್ರೆಗಳಲ್ಲಿ ಕೆಟ್ಟಿರುವ ಉಪಕರಣ ಹಾಗೂ ಯಂತ್ರಗಳ ಸಂಖ್ಯೆ ಎಷ್ಟು ; ಯಾವುವು ;

(ಇ) ಸದರಿ ಉಪಕರಣ ಹಾಗೂ ಯಂತ್ರಗಳು ಯಾವ ಸಮಯದಿಂದ ಕೆಟ್ಟುಹೋಗಿವೆ ; (ಕಾಲೇಜುವಾರು ವಿವರವಾದ ಮಾಹಿತಿ ನೀಡುವುದು)

(ಈ) ಸದರಿ ಕೆಟ್ಟಿರುವ, ಯಂತ್ರ ಹಾಗೂ ಉಪಕರಣಗಳ ದುರಸ್ತಿಗೆ ಸರ್ಕಾರ ಇದುವರೆವಿಗೆ ಕೈಗೊಂಡಿರುವ ಕ್ರಮಗಳೇನು ? (ಕಾಲೇಜುವಾರು ವಿವರ ನೀಡುವುದು)

## ಹಿಂದುಳಿದ ವರ್ಗಗಳ ಇಲಾಖೆಗೆ ನೀಡಿರುವ ಅನುದಾನ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

**೩೮೪** (೨೧೨೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳ ಹಲವಾರು ಜನಾಂಗದ ಅಭಿವೃದ್ಧಿಗೆ, ಮಠಗಳು ಸೇರಿದಂತೆ ಸರ್ಕಾರದಿಂದ ವಿಶೇಷ ಅನುದಾನವನ್ನು ನೀಡಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಜನಾಂಗಕ್ಕೆ ಅನುದಾನ ನೀಡಲಾಗಿದೆ ; ಇದುವರೆಗೂ ಬಿಡುಗಡೆ ಮಾಡಲಾದ ಅನುದಾನವೆಷ್ಟು ; ಸದರಿ ಅನುದಾನ ಪಡೆಯಲು ವಿಧಿಸುವ ಮಾನದಂಡಗಳೇನು ; ಆ ಸಂಸ್ಥೆಗಳು ಅನುದಾನ ಪಡೆಯಲು ವೆಚ್ಚ ಮಾಡಿರುವ ಅವರ ಸ್ವಂತ ದೇಣಿಗೆ ಎಷ್ಟು ? (ಜನಾಂಗವಾರು ವಿವರ ನೀಡುವುದು)

## ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಪಡಿತರ ಕಾರ್ಡ್‌ಗಳು

**ಶ್ರೀ ಐವಾನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೩೮೫ (೨೯೧೮) ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನೀಡಿದ ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಪಡಿತರ ಕಾರ್ಡ್‌ಗಳೆಷ್ಟು ; (ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಎಷ್ಟು ನಾಗರಿಕ ಆಹಾರ ಸರಬರಾಜು ಮಾಡುವ ಕೇಂದ್ರಗಳಿವೆ ; (ವಿವರ ನೀಡುವುದು)

(ಇ) ಪ್ರತಿ ತಿಂಗಳು ಸರಬರಾಜು ಆಗುವ ಆಹಾರದ ಪ್ರಮಾಣವೆಷ್ಟು ; (ವಿವರ ನೀಡುವುದು)

(ಈ) ಜಿಲ್ಲೆಯಲ್ಲಿ ಎಷ್ಟು ನಕಲಿ ರೇಷನ್ ಕಾರ್ಡ್‌ಗಳನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಉ) ಮಂಗಳೂರು ನಗರದಲ್ಲಿ ಎಷ್ಟು ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಕಾರ್ಡ್‌ಗಳನ್ನು ನೀಡಲಾಗಿದೆ ; ಎಷ್ಟು ಅರ್ಜಿಗಳು ಬಂದಿವೆ ; ಎಷ್ಟು ಬಾಕಿ ಇವೆ ; (ವಿವರ ನೀಡುವುದು)

(ಊ) ನಗರದ ಬೆಂಗ್ರೆಕಸುವಾ ಗ್ರಾಮದಲ್ಲಿ ಎಷ್ಟು ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಕಾರ್ಡ್‌ಗಳನ್ನು ನೀಡಲಾಗಿದೆ ಮತ್ತು ಎಷ್ಟು ಅರ್ಜಿಗಳು ಬಾಕಿ ಇವೆ ? (ವಿವರ ನೀಡುವುದು)

## ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಘಟಕಗಳು

**ಡಾ॥ ಜೈಮಾಲಾ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೩೮೬ (೨೧೨೨) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪ್ರಾಥಮಿಕ ಆರೋಗ್ಯ ಘಟಕಗಳಿವೆ ; ಜನಸಂಖ್ಯೆಗೆ ಅನುಗುಣವಾಗಿ ಎಷ್ಟು ಕೇಂದ್ರ ಘಟಕಗಳಿರಬೇಕು ;

(ಆ) ಜನಸಂಖ್ಯೆಯ ಅನುಪಾತಕ್ಕೆ ಅನುಗುಣವಾಗಿ ಆರೋಗ್ಯ ಕೇಂದ್ರ ಮತ್ತು ಆರೋಗ್ಯ ಘಟಕಗಳಿವೆಯೇ ;

(ಇ) ಈ ಆರೋಗ್ಯ ಕೇಂದ್ರ ಮತ್ತು ಘಟಕಗಳಲ್ಲಿ ವೈದ್ಯರ ಹಾಗೂ ದಾದಿಯರ ಕೊರತೆಯಿದೆಯೇ ;

(ಈ) ಕೊರತೆ ಇದ್ದರೆ, ಅವರನ್ನು ನೇಮಕ ಮಾಡಿಕೊಳ್ಳಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ವೈದ್ಯಕೀಯ ಮಹಾವಿದ್ಯಾಲಯ ಕಾರ್ಯಾರಂಭ ಮಾಡದಿರುವುದು

**ಶ್ರೀ ಆರ್.ಕೆ.ಸಿದ್ದರಾಮಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩೮೭ (೨೦೯೭) ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗದ ಆಯುರ್ವೇದಿಕ್ ವೈದ್ಯಕೀಯ ಮಹಾವಿದ್ಯಾಲಯಕ್ಕೆ ಮಂಜೂರಾತಿ ದೊರೆತು ೬ ವರ್ಷಗಳಾದರೂ ಇದುವರೆಗೂ ಕಾರ್ಯಾರಂಭ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ಮಹಾವಿದ್ಯಾಲಯದ ಕಾರ್ಯಾರಂಭಕ್ಕೆ ಇರುವ ಅಡೆ–ತಡೆಗಳೇನು ; (ವಿವರ ನೀಡುವುದು)

(ಇ) ಎಂದಿನಿಂದ ಕಾರ್ಯಾರಂಭ ಮಾಡಲಾಗುವುದು ? (ವಿವರ ನೀಡುವುದು)

## ಐ.ಟಿ. ಪಾರ್ಕ್ ಸ್ಥಾಪನೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೩೮೮ (೨೦೮೮) ಯೋಜನೆ ಮತ್ತು ಸಾಂಖ್ಯಿಕ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಹಾಗೂ ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲಬರ್ಗಾದಲ್ಲಿ ಐ.ಟಿ.ಪಾರ್ಕ್ ಯಾವ ವರ್ಷದಲ್ಲಿ ಮಂಜೂರಾಗಿದೆ ; ಪೂರ್ಣ ಪ್ರಮಾಣದಲ್ಲಿ ಕಾರ್ಯಾರಂಭ ಮಾಡಿರುವುದು ಯಾವಾಗ ; (ವಿವರ ನೀಡುವುದು)

(ಆ) ಐ.ಟಿ. ಪಾರ್ಕ್ ಸ್ಥಾಪನೆಯ ಧ್ಯೇಯೋದ್ದೇಶಗಳೇನು ; ಎಷ್ಟು ಕಂಪನಿಗಳು ಕಾರ್ಯನಿರ್ವಹಿಸುವ ಯೋಜನೆ ಹೊಂದಲಾಗಿತ್ತು ಮತ್ತು ಎಷ್ಟು ಉದ್ಯೋಗಗಳು ಸೃಷ್ಟಿಯಾಗಬೇಕಿತ್ತು ; ಪ್ರಸ್ತುತ ಎಷ್ಟು ಉದ್ಯೋಗಿಗಳು ಕೆಲಸ ನಿರ್ವಹಿಸುತ್ತಿದ್ದಾರೆ ;

(ಇ) ಉದ್ದೇಶಿತ ಯೋಜನೆ ಸಫಲಗೊಂಡಿದೆಯೇ ; ಹಾಗಿದ್ದಲ್ಲಿ, ಬಂಡವಾಳ ಹೂಡಿಕೆಯ ಯೋಜನೆ ರೂಪಿಸಿ ಉದ್ಯೋಗ ಸೃಷ್ಟಿಸುವ ಯೋಜನೆ ಸರ್ಕಾರದ ಮುಂದಿದೆಯೇ ; (ವಿವರಿಸುವುದು)

(ಈ) ಹೈ.ಕ. ಭಾಗದ ಬಳ್ಳಾರಿ ಜಿಲ್ಲೆ ಎಲ್ಲಾ ಹಂತದಲ್ಲಿ ವೇಗವಾಗಿ ಬೆಳೆಯುತ್ತಿದ್ದು, ಇಲ್ಲಿಯೂ ಐ.ಟಿ. ಕ್ಷೇತ್ರದಲ್ಲೂ ಹೆಚ್ಚಿನ ಪ್ರಗತಿ ಹೊಂದಲು ಹೊಸದಾಗಿ ಐ.ಟಿ. ಪಾರ್ಕ್ ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ?

## ವಿವಿಧ ವರ್ಗಗಳ ಜನರಿಗೆ ಕೊರೆಸಿಕೊಡಲಾಗಿರುವ ಕೊಳವೆ ಬಾವಿಗಳು

**ಶ್ರೀ ಕೆ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೩೮೯ (೨೦೭೧) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪಂಚಾಯಿತಿವಾರು ನಿರ್ಮಿಸಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಕೊಳವೆ ಬಾವಿಗಳ ನಿಯಂತ್ರಣಕ್ಕೆ ಯಾವುದಾದರೂ ಕಾನೂನನ್ನು ರೂಪಿಸಲಾಗಿದೆಯೇ ; ಹಾಗಿದ್ದಲ್ಲಿ, ಮಾಹಿತಿ ನೀಡುವುದು ;

(ಆ) ಕಳೆದ ಮೂರು ವರ್ಷಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮತ್ತು ಅಲ್ಪಸಂಖ್ಯಾತ ಹಾಗೂ ಇನ್ನಿತರೆ ವರ್ಗಗಳಿಗೆ ಕೊರೆಸಿಕೊಡಲಾಗಿರುವ ಕೊಳವೆ

ಬಾವಿಗಳು ಎಷ್ಟು ; ಇದಕ್ಕೆ ಇರುವ ನಿಯಮಗಳು ಏನು ; (ಗ್ರಾಮ ಪಂಚಾಯಿತಿವಾರು ಕೊಳವೆ ಬಾವಿಗಳ ವಿವರಗಳನ್ನು ನೀಡುವುದು)

(ಇ) ಪ್ರತಿ ಕೊಳವೆ ಬಾವಿಗಳಿಗೆ ತಗುಲಿರುವ ವೆಚ್ಚ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು) ಕೊರೆಸಲಾಗಿರುವ ಕೊಳವೆ ಬಾವಿಗಳಲ್ಲಿ ಎಷ್ಟು ವಿಫಲವಾಗಿದೆ ;, ನೀರನ್ನು ಒದಗಿಸುತ್ತಿರುವ ಕೊಳವೆ ಬಾವಿಗಳೆಷ್ಟು ;

(ಈ) ವಿದ್ಯುದೀಕರಣಗೊಂಡಿರುವ ಹಾಗೂ ವಿದ್ಯುದೀಕರಣ ಪೂರೈಸಬೇಕಾಗಿರುವ ಕೊಳವೆ ಬಾವಿಗಳೆಷ್ಟು ? (ಪಂಚಾಯಿತಿವಾರು ಮಾಹಿತಿ ನೀಡುವುದು)

## ಚಿಕೂನ್ ಗುನ್ಯಾ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೩೯೦ (೨೧೨೭) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಚಿಕೂನ್ ಗುನ್ಯಾ ಎಂಬ ಮಾರಕ ರೋಗ ಹರಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಇಲ್ಲಿಯವರೆಗೂ ಕೈಗೊಂಡಿರುವ ಕ್ರಮಗಳೇನು ;

(ಇ) ಚಿಕೂನ್ ಗುನ್ಯಾ ಖಾಯಿಲೆಗೆ ತುತ್ತಾಗಿರುವ ನಗರ ಮತ್ತು ಪಟ್ಟಣಗಳ ಅಂಕಿ–ಅಂಶಗಳನ್ನು ಒದಗಿಸುವುದು ;

(ಈ) ಚಿಕೂನ್ ಗುನ್ಯಾ ರೋಗಕ್ಕೆ ಔಷಧಿಗಳನ್ನು ದಾಸ್ತಾನು ಮಾಡಲಾಗಿದೆಯೇ ಹಾಗೂ ಈ ರೋಗಕ್ಕೆ ಇತ್ತೀಚೆಗೆ ಹೊಸದಾಗಿ ಔಷಧಿಗಳನ್ನೇನಾದರೂ ಕಂಡುಕೊಳ್ಳಲಾಗಿದೆಯೇ ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 456, ಪ್ರತಿಗಳು– 1500 – ವಿ8